687 (923) ಶ್ರೀ ಉಮಾಪತಿ ಎ.ವಿ. (ಹೊಳಲ್ಕೆರೆ) :– ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ರಾಜ್ಯದಲ್ಲಿ ಮೇಲ್ದರ್ಜೆಗೇರಿಸಿದ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು) ;

ಆ) ಮೇಲ್ದರ್ಜೆಗೇರಿಸಿದ ಆಸ್ಪತ್ರೆಗಳಿಗೆ ಸೌಕರ್ಯ (ಸಿಬ್ಬಂದಿ, ಕಟ್ಟಡ, ಔಷಧಿಗಳು) ಗಳನ್ನು ಒದಗಿಸಿದೆಯೇ ;

ಇ) ಬಯಲು ಸೀಮೆ ಚಿತ್ರದುರ್ಗ ಸೇರಿದಂತೆ ಎಲ್ಲಾ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

ಈ) ಹಾಗಿದ್ದಲ್ಲಿ, ಮೇಲ್ದರ್ಜೆಗೇರಿಸಿದ ಆಸ್ಪತ್ರೆಗಳಿಗೆ ವೈದ್ಯರುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :–

ಅ) ರಾಜ್ಯದಲ್ಲಿ 149 ತಾಲ್ಲೂಕು ಆಸ್ಪತ್ರೆಗಳನ್ನು 100 ಹಾಗೂ 100ಕ್ಕಿಂತ ಹೆಚ್ಚಿನ ಹಾಸಿಗೆಗಳ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. 76 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. 516 ಪ್ರಾಥಮಿಕ ಆರೋಗ್ಯ ಘಟಕಗಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನಾಗಿ ತಾತ್ವಿಕವಾಗಿ ಮೇಲ್ದರ್ಜೆಗೇರಿಸಲಾಗಿದೆ ಹಾಗೂ ಹಾಸನ ಜಿಲ್ಲಾ ಆಸ್ಪತ್ರೆಯನ್ನು 750 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. (ವಿವರಗಳನ್ನು ಅನುಬಂಧ–1ರಲ್ಲಿ ಕೊಡಲಾಗಿದೆ)

ಆ) ಮೇಲ್ದರ್ಜೆಗೇರಿಸಿದ ಆಸ್ಪತ್ರೆಗಳಿಗೆ ಸಿಬ್ಬಂದಿ ವರ್ಗದವರನ್ನು ಮಂಜೂರು ಮಾಡಲಾಗಿದೆ, ಕಟ್ಟಡ ಕಾಮಗಾರಿಗಳು ಪ್ರಗತಿಯಲ್ಲಿದ್ದು ಪೂರ್ಣಗೊಂಡ ನಂತರ ಸಿಬ್ಬಂದಿಗಳನ್ನು ನಿಯೋಜಿಸಲಾಗುವುದು ಹಾಗೂ ಔಷಧಿಗಳನ್ನು ಅದಕ್ಕನುಗುಣವಾಗಿ ವಿತರಿಸಲಾಗುವುದು.

ಇ) ಬಂದಿದೆ.

ಈ) ಮೇಲ್ದರ್ಜೆಗೇರಿಸಿರುವ ಆಸ್ಪತ್ರೆಗಳ ಕಟ್ಟಡ ಕಾಮಗಾರಿ 60% ರಷ್ಟು ಪೂರ್ಣಗೊಂಡ ನಂತರ ಹೆಚ್ಚುವರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

688 (1020) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) :– ವೈದ್ಯಕೀಯ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) 2007ನೇ ಸಾಲಿನ ಸಾಮಾನ್ಯ ಪರೀಕ್ಷಾ ಘಟಕದಲ್ಲಿ ವೈದ್ಯಕೀಯ ಸೀಟುಗಳು ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;